ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:54:ಸುತ್ತೋಲೆ:2021-22/ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:11.01.2023.

**ಇವರಿಗೆ,**
ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು/ಮೈಸೂರು/ಧಾರವಾಡ
ಶಿವಮೊಗ್ಗ/ಮಂಗಳೂರು/ಗುಲ್ಬರ್ಗಾ.

**ಮಾನ್ಯರೇ,**

**ವಿಷಯ:** ಸರ್ಕಾರದ ಅಧಿಸೂಚನೆ / ಸುತ್ತೋಲೆಗಳನ್ನು ಪರಿಚಲಿಸುವ ಬಗ್ಗೆ.

** ** **

ಸರ್ಕಾರದಿಂದ ಜಾರಿಗೊಳಿಸಿರುವ/ಹೊರಡಿಸಲಾಗಿರುವ ಈ ಕೆಳಕಂಡ ಆದೇಶ/ ಸುತ್ತೋಲೆ/ ಅಧಿಸೂಚನೆಗಳನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ಅಗತ್ಯತೆ ಅನುಸಾರ ಇವುಗಳನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ ಪರಿಚಲಿಸುವಂತೆ ಸೂಚಿಸಲಾಗಿದೆ.

| ಕ್ರ.ಸಂ | ಪತ್ರಸಂಖ್ಯೆ | ವಿಷಯ |
|---|---|---|
| 01 | ಸರ್ಕಾರದ ಆದೇಶ ಸಂಖ್ಯೆ:ಸಿಆಸು (ಆಸು) 152 ಇಆಸು 2022, ಬೆಂಗಳೂರು, ದಿನಾಂಕ:28.12.2022. | ರಾಜಸ್ಥಾನದ ಜೈಪುರದಲ್ಲಿ ನಡೆಯಲಿರುವ ಅಖಿಲ ಭಾರತ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಮಹಿಳಾ ಸಮಾವೇಶಕ್ಕೆ ರಾಜ್ಯದಿಂದ ಭಾಗವಹಿಸುವ ಪ್ರತಿನಿಧಿಗಳಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ನೀಡುವ ಬಗ್ಗೆ. |

**ಅಡಕ:**ಮೇಲಿನಂತೆ

ತಮ್ಮ ವಿಶ್ವಾಸಿ,
11/01/2023
ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ.
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.

5286604 (ಸಾ.ಆ.) ತನಿಖೆ
ಗ1/2023

0 6 JAN 2023

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಜಸ್ಥಾನದ ಜೈಪುರದಲ್ಲಿ ನಡೆಯಲಿರುವ ಅಖಿಲ ಭಾರತ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಮಹಿಳಾ ಸಮಾವೇಶಕ್ಕೆ ರಾಜ್ಯದಿಂದ ಭಾಗಹಿಸುವ ಪ್ರತಿನಿಧಿಗಳಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ನೀಡುವ ಬಗ್ಗೆ.

**ಓದಲಾಗಿದೆ:-** ಪ್ರಧಾನ ಕಾರ್ಯದರ್ಶಿಗಳು, ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ (AKSGEF) ಇವರ ಪತ್ರ ಸಂಖ್ಯೆ: ಅಕರಾಸನೌಒ:285/2022. ದಿನಾಂಕ:29-11-2022.

********

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಪ್ರಧಾನ ಕಾರ್ಯದರ್ಶಿ, ಅಖಿಲ ಭಾರತ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ (ರಿ), ಬೆಂಗಳೂರು ಇವರು ದಿನಾಂಕ:28-01-2023 ರಿಂದ 29-01-2023 ರವರೆಗೆ ರಾಜಸ್ಥಾನದ ಜೈಪುರದಲ್ಲಿ ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಮಹಿಳಾ ಸಮಾವೇಶದಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಿಂದ 10 ನೌಕರ ಪ್ರತಿನಿಧಿಗಳು ಆಯ್ಕೆಯಾಗಿದ್ದು, ಸದರಿ ಸಮಾವೇಶದಲ್ಲಿ ಭಾಗವಹಿಸಲು ಪ್ರಯಾಣದ ಅವಧಿಯೂ ಸೇರಿದಂತೆ ದಿನಾಂಕ: 25-01-2023 ರಿಂದ 1-02-2023 ರವರೆಗೆ ಒಟ್ಟು 08 ದಿನಗಳ ಕಾಲ "ವಿಶೇಷ ಸಾಂದರ್ಭಿಕ ರಜೆ"ಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸು(ಆಸು) 152 ಇಆಸು 2022,**
**ಬೆಂಗಳೂರು, ದಿನಾಂಕ:- 28-12-2022.**

ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ವತಿಯಿಂದ ದಿನಾಂಕ:28-01-2023 ರಿಂದ 29-01-2023 ರವರೆಗೆ ರಾಜಸ್ಥಾನದ ಜೈಪುರದಲ್ಲಿ ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಮಹಿಳಾ ಸಮಾವೇಶದಲ್ಲಿ ಭಾಗವಹಿಸುವ ರಾಜ್ಯದ 10 ನೌಕರ ಪ್ರತಿನಿಧಿಗಳಿಗೆ ಪ್ರಯಾಣದ ಅವಧಿಯೂ ಸೇರಿದಂತೆ ದಿನಾಂಕ:25-01-2023 ರಿಂದ 1-02-2023 ರವರೆಗೆ ಒಟ್ಟು 08 ದಿನಗಳ ಕಾಲ "ವಿಶೇಷ ಸಾಂದರ್ಭಿಕ ರಜೆ"ಯನ್ನು ಮಂಜೂರು ಮಾಡಲಾಗಿದೆ.

ಸದರಿ ಸಮಾವೇಶದಲ್ಲಿ ಭಾಗವಹಿಸುವ ಪ್ರತಿನಿಧಿಗಳಿಗೆ ಮಂಜೂರಾಗಿರುವ ವಿಶೇಷ ಸಾಂದರ್ಭಿಕ ರಜೆಯನ್ನು ಹೊರತುಪಡಿಸಿ, ಯಾವುದೇ ಪ್ರಯಾಣ ಭತ್ಯೆ/ದಿನಭತ್ಯೆ(ಟಿ.ಎ/ಡಿ.ಎ) ಅಥವಾ ಬೇರೆ ಯಾವುದೇ ಸೌಲಭ್ಯ ಅಥವಾ ಆರ್ಥಿಕ ಸಹಾಯವನ್ನು ನೀಡಲಾಗುವುದಿಲ್ಲ.

ಸದರಿ ಸಮಾವೇಶದಲ್ಲಿ ಭಾಗವಹಿಸುವ ಕರ್ನಾಟಕ ರಾಜ್ಯದ 10 ನೌಕರ ಪ್ರತಿನಿಧಿಗಳು ಹಾಜರಾತಿ ಪ್ರಮಾಣ ಪತ್ರವನ್ನು ತಪ್ಪದೇ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ (ಸೇವೆಗಳು-3) ಟಿಪ್ಪಣಿ ಸಂಖ್ಯೆ: ಆಇ 105 ಸೇ-3/2022. ದಿನಾಂಕ: 21-12-2022 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

G. Sudha 28/12/2022
(ಜಿ.ಸುಧಾ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಆಸುಇ (ಆಡಳಿತ ಸುಧಾರಣೆ).

**ಇವರಿಗೆ:**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಪ್ರಧಾನ ಕಾರ್ಯದರ್ಶಿಗಳು, ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ (ರಿ), ಬೆಂಗಳೂರು.
4. ಸಂಬಂಧಪಟ್ಟ ಅಧಿಕಾರಿ/ನೌಕರರು (ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ಮೂಲಕ)
5. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಸೇವೆಗಳು), ವಿಧಾನಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.